# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 358 |
| ಉತ್ತರಿಸಬೇಕಾದ ದಿನಾಂಕ | : | 18.07.2024 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಯವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಲ್ಲಿ ಕ್ರೀಡಾ ಅಭಿವೃದ್ಧಿಗಾಗಿ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; | ಕ್ರೀಡಾಪಟುಗಳ ಉತ್ತೇಜನಕ್ಕಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಂತರರಾಷ್ಟ್ರೀಯ ಮಟ್ಟದ 400ಮೀ. ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್, ಫುಟ್ಬಾಲ್, ವಾಲಿಬಾಲ್, ಸ್ಕೇಟಿಂಗ್, ಬಾಸ್ಕೆಟ್‌ಬಾಲ್, ಟೇಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್ ಅಂಕಣಗಳನ್ನು ನಿರ್ಮಿಸಲಾಗಿದ್ದು, ವಿಜಯಪುರ ನಗರದಲ್ಲಿ ಈಜುಕೊಳವನ್ನು ನಿರ್ಮಿಸಲಾಗಿರುತ್ತದೆ. ಅಲ್ಲದೇ, ಇಂಡಿ ಹಾಗೂ ಸಿಂದಗಿ ತಾಲ್ಲೂಕು ಕೇಂದ್ರಗಳಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿರುತ್ತದೆ. ಸೈಕ್ಲಿಂಗ್ ವೆಲೋಡ್ರೋಮ್ ಕಾಮಗಾರಿ ಅಂತಿಮ ಹಂತದಲ್ಲಿದೆ.<br><br>ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟ ಹಾಗೂ ದಸರಾ ಕ್ರೀಡಾಕೂಟಗಳನ್ನು ಆಯೋಜಿಸಲಾಗಿರುತ್ತದೆ.<br>• ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ದಿನಾಂಕ: 12-09-2023<br>• ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟ ದಿನಾಂಕ: 30-09-2023.<br>• ತಾಲ್ಲೂಕು ಮಟ್ಟದ ವಿಕಲಚೇತನರ ಕ್ರೀಡಾಕೂಟ ದಿನಾಂಕ: 21-11-2023<br>• ಜಿಲ್ಲಾ ಮಟ್ಟದ ವಿಕಲಚೇತನರ ಕ್ರೀಡಾಕೂಟ ದಿನಾಂಕ: 27-11-2023.<br><br>ವಿಜಯಪುರ ಜಿಲ್ಲೆಯಲ್ಲಿ ಕ್ರೀಡಾ ವಸತಿ ನಿಲಯವು ಕಾರ್ಯನಿರ್ವಹಿಸುತ್ತಿದ್ದು, ಸದರಿ ಕ್ರೀಡಾ ವಸತಿ ನಿಲಯದಲ್ಲಿ ಸೈಕ್ಲಿಂಗ್, ವಾಲಿಬಾಲ್ ಮತ್ತು ಬಾಸ್ಕೆಟ್‌ಬಾಲ್ ಕ್ರೀಡೆಯಲ್ಲಿ ಕ್ರೀಡಾಪಟುಗಳಿಗೆ ವೈಜ್ಞಾನಿಕ ಕ್ರೀಡಾ ತರಬೇತಿ ನೀಡಲಾಗುತ್ತಿದೆ. |
| ಆ) | ಸೈಕ್ಲಿಸ್ಟ್ ಗಳ ವೆಲೋಡ್ರೋಂ ಕಾಮಗಾರಿಯು ಕಳಪೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ಬಗ್ಗೆ ತನಿಖೆ ನಡೆಯುತ್ತಿದೆಯೇ: (ವಿವರ ನೀಡುವುದು) | ಇಲ್ಲ.<br><br>ಪ್ರಸ್ತುತ ವಿಜಯಪುರದಲ್ಲಿ ಸೈಕ್ಲಿಂಗ್ ವೆಲೋಡ್ರೋಂ ನಿರ್ಮಾಣ ಕಾಮಗಾರಿ ಅಂತಿಮ ಹಂತದಲ್ಲಿದೆ.<br><br>ಸದರಿ ಕಾಮಗಾರಿಯು ವಿಶಿಷ್ಟ ತಾಂತ್ರಿಕತೆಯನ್ನು ಒಳಗೊಂಡಿದ್ದ ಹಿನ್ನೆಲೆಯಲ್ಲಿ ಈ ಹಿಂದೆ ಕಾಮಗಾರಿಯಲ್ಲಿ ತಾಂತ್ರಿಕ ದೋಷಗಳು ಉಂಟಾಗಿ, ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿತ್ತು. ಪ್ರಸ್ತುತ ಕಾಮಗಾರಿಯನ್ನು ಪುನರ್ ಆರಂಭಿಸಲಾಗಿದ್ದು, ಈ ಹಿಂದೆ ಉಂಟಾಗಿದ್ದ ತಾಂತ್ರಿಕ ನ್ಯೂನತೆಗಳನ್ನು ಗುತ್ತಿಗೆದಾರರ ಸ್ವಂತ ವೆಚ್ಚದಲ್ಲಿ ಸರಿಪಡಿಸಲಾಗಿರುತ್ತದೆ. ಕಾಮಗಾರಿಯು ತಾಂತ್ರಿಕ ಗುಣಮಟ್ಟದಂತೆ |

| | | |
|---|---|---|
| | | ನಡೆಯುವುದನ್ನು ಖಾತರಿಪಡಿಸಲು ಪರಿಣತ ಯೋಜನಾ ಸಮಾಲೋಚಕರನ್ನು ನೇಮಿಸಲಾಗಿದೆ. ಸೈಕ್ಲಿಂಗ್ ಕ್ಷೇತ್ರದ ಪರಿಣತರ ಸಲಹೆಯನ್ನು ಪಡೆಯಲಾಗುತ್ತಿದೆ.<br><br>ಪ್ರಸ್ತುತ ಕಾಮಗಾರಿಯು ಶೇ 95ರಷ್ಟು ಪೂರ್ಣಗೊಂಡಿದ್ದು, ಟ್ರ್ಯಾಕ್‌ನ ಮೇಲ್ಭಾಗವು ಸಮತಟ್ಟಾಗಿರುವುದನ್ನು ಖಾತರಿಪಡಿಸುವುದು ಹಾಗೂ ಪೇಂಟಿಂಗ್ ಕಾಮಗಾರಿ ಬಾಕಿ ಇರುತ್ತದೆ. ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ಶೀಘ್ರ ಕ್ರೀಡಾಪಟುಗಳ ಬಳಕೆಗೆ ಒದಗಿಸಲಾಗುವುದು. |
| ಇ) | ಈ ಯೋಜನೆಗಳು ಯಾವ ಹಂತದಲ್ಲಿವೆ: (ವಿವರ ನೀಡುವುದು) | ವಿಜಯಪುರ ನಗರದಲ್ಲಿ ನಿರ್ಮಿಸುತ್ತಿರುವ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾರಿಯು ಶೇ 95 ರಷ್ಟು ಪೂರ್ಣಗೊಂಡಿರುತ್ತದೆ. ಟ್ರ್ಯಾಕ್‌ನ ಕೆಲವು ಭಾಗಗಳಲ್ಲಿ ಸಮತಟ್ಟು ಮಾಡುವುದು, ಎಪಾಕ್ಸಿ ಪೇಂಟಿಂಗ್ ಅಳವಡಿಸುವ ಕಾಮಗಾರಿ ಬಾಕಿಯಿರುತ್ತದೆ. |
| ಈ) | ಕ್ರೀಡೆಯಲ್ಲಿ ಅತ್ಯುತ್ತಮ ಸಾಧನೆಗೈದ ಕ್ರೀಡಾಪಟುಗಳಿಗೆ ಉದ್ಯೋಗ ನೀಡಲು ಸರ್ಕಾರ ಏನಾದರು ಕ್ರಮಕೈಗೊಳ್ಳುವುದೇ? | ಸಾಧಕ ಕ್ರೀಡಾಪಟುಗಳಿಗೆ ಉದ್ಯೋಗ ನೀಡಲು ಸರ್ಕಾರವು ಕೆಳಕಾಣಿಸಿದ ಕ್ರಮಗಳನ್ನು ಕೈಗೊಂಡಿದೆ.<br><br>1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 204 ಸೇನೆನಿ 2022, ದಿನಾಂಕ 21-03-2024 ರನ್ವಯ ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್, ಏಷಿಯನ್ ಗೇಮ್ಸ್, ಪ್ಯಾರಾ ಏಷಿಯನ್ ಗೇಮ್ಸ್ ಮತ್ತು ಕಾಮನ್‌ವೆಲ್ತ್ ಗೇಮ್ಸ್‌ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ರಾಜ್ಯದ ಸಿವಿಲ್ ಸೇವೆಯಲ್ಲಿನ ಗ್ರೂಪ್-ಎ, ಗ್ರೂಪ್-ಬಿ ಮತ್ತು ಇತರೆ ವೃಂದದ ಹುದ್ದೆಗಳಿಗೆ ವಿಶೇಷ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br>2. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 295 ಸೇನೆನಿ 2023, ದಿನಾಂಕ 15-02-2024 ರನ್ವಯ ನೇರ ನೇಮಕಾತಿಯಡಿ ಪ್ರತಿ ಇಲಾಖೆಯ ಮಂಜೂರಾದ ವೃಂದ ಬಲದ ಶೇಕಡಾ 2 (ಎರಡು) ರಷ್ಟು ಹುದ್ದೆಗಳನ್ನು ಕ್ರೀಡಾ ಸಾಧಕ ಅಭ್ಯರ್ಥಿಗಳಿಗೆ ಮೀಸಲಿರಿಸುವ ಕುರಿತು ಕರಡು ಅಧಿಸೂಚನೆಯನ್ನು ಪ್ರಕಟಿಸಲಾಗಿದೆ. ಪ್ರಸ್ತುತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸ್ವೀಕರಿಸಲಾದ ಆಕ್ಷೇಪಣೆಗಳನ್ನು ಪರಿಶಿಲಿಸಿ, ಅಂತಿಮ ಅಧಿಸೂಚನೆ ಹೊರಡಿಸುವ ಬಗ್ಗೆ ಕ್ರಮ ವಹಿಸುತ್ತಿದೆ.<br>3. 2023-24 ನೇ ಸಾಲಿನ ಸನ್ಮಾನ್ಯ ಮುಖ್ಯಮಂತ್ರಿಯವರ ಆಯವ್ಯಯ ಭಾಷಣದ ಕಂಡಿಕೆ-291 ರಲ್ಲಿ ಪೊಲೀಸ್ ಮತ್ತು ಅರಣ್ಯ ಇಲಾಖೆಗಳಲ್ಲಿ 3% ರಷ್ಟು ಹುದ್ದೆಗಳನ್ನು ಕ್ರೀಡಾ ಸಾಧಕರಿಗೆ ಮೀಸಲಿಡುವ ಬಗ್ಗೆ ಘೋಷಿಸಲಾಗಿದ್ದು, ಈ ಬಗ್ಗೆ ಸಂಬಂಧಿತ ಇಲಾಖೆಗಳು ಕ್ರಮ ವಹಿಸುತ್ತಿವೆ. ಈಗಾಗಲೇ ಪೊಲೀಸ್ ಇಲಾಖೆಯು ಸಬ್-ಇನ್ಸ್‌ಪೆಕ್ಟರ್ ಮತ್ತು ಕಾನ್ಸ್‌ಟೇಬಲ್ ವೃಂದಗಳಲ್ಲಿ ಕ್ರೀಡಾ ಸಾಧಕರಿಗೆ ನೇಮಕಾತಿ ಆದೇಶ ನೀಡಿದೆ. |

| | | |
|---|---|---|
| | | 4. ಸರ್ಕಾರದ ಅಧಿಸೂಚನೆ ಸಂಖ್ಯೆ:ವೈಎಸ್‌ಡಿ-ಇವೈಡಬ್ಲ್ಯೂ/178/2021, ದಿನಾಂಕ 27-06-2024 ರನ್ವಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿಯಡಿ ಸಾಧಕ ಕ್ರೀಡಾಪಟುಗಳಿಗೆ ಈ ಕೆಳಕಂಡಂತೆ ಹುದ್ದೆಗಳನ್ನು ನಿಗಧಿಪಡಿಸಲಾಗಿದೆ.<br>1) ಸಹಾಯಕ ನಿರ್ದೇಶಕರ ಒಟ್ಟು 15 ಹುದ್ದೆಗಳಲ್ಲಿ 10 ಹುದ್ದೆಗಳನ್ನು ಸಾಧಕ ಕ್ರೀಡಾಪಟುಗಳು ಹಾಗೂ 05 ಹುದ್ದೆಗಳನ್ನು ರಾಜ್ಯವನ್ನು/ವಿಶ್ವವಿದ್ಯಾಲಯವನ್ನು ರಾಷ್ಟ್ರ ಮಟ್ಟದಲ್ಲಿ ಪ್ರತಿನಿಧಿಸಿದ ಕ್ರೀಡಾಪಟುವಾಗಿರುವ ದೈಹಿಕ ಶಿಕ್ಷಣ ಪರಿಣತರಿಗೆ ಮೀಸಲಿಡಲಾಗಿದೆ.<br>2) ತಾಲ್ಲೂಕು ಹಿರಿಯ ತರಬೇತುದಾರರು ಮತ್ತು ಸಂಯೋಜಕರ 02 ಹುದ್ದೆಗಳನ್ನು ಸಾಧಕ ಕ್ರೀಡಾಪಟುಗಳಿಗೆ ಮೀಸಲಿಡಲಾಗಿದೆ.<br>3) ತಾಲ್ಲೂಕು ಕಿರಿಯ ತರಬೇತುದಾರರು ಕಂ ಸಂಯೋಜಕರು-ಗ್ರೇಡ್-1 ವೃಂದದಲ್ಲಿ ಒಟ್ಟು 08 ಹುದ್ದೆಗಳನ್ನು ಕ್ರೀಡಾ ಸಾಧಕರಿಗೆ ಮೀಸಲಿಡಲಾಗಿದೆ.<br>4) ತಾಲ್ಲೂಕು ಕಿರಿಯ ತರಬೇತುದಾರರು ಕಂ ಸಂಯೋಕರು ಗ್ರೇಡ್-2 ವೃಂದದ 71 ಹುದ್ದೆಗಳನ್ನುಕ್ರೀಡಾ ಸಾಧಕರಿಗೆ ಮೀಸಲಿಡಲಾಗಿದೆ. |

ವೈಎಸ್‌ಡಿ-ಇಬಿಬಿ/57/2024

**(ಸಿದ್ಧರಾಮಯ್ಯ)**

ಮುಖ್ಯಮಂತ್ರಿ